## ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1079 |
| ಉತ್ತರಿಸಬೇಕಾದ ದಿನಾಂಕ | : | 25.08.2026 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ನಿರ್ಮಾಣ ವೆಚ್ಚ ಮತ್ತು ಕಟ್ಟಡ ಸಾಮಗ್ರಿಗಳ ಬೆಲೆ ಏರಿಕೆಯನ್ನು ಪರಿಗಣಿಸಿ, ಗ್ರಾಮೀಣ ಬಡ ಕುಟುಂಬಗಳಿಗೆ ನೀಡಲಾಗುತ್ತಿರುವ ವಸತಿ ಸಹಾಯಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಹೌದು |
| ಆ) | ಬೆಲೆ ಏರಿಕೆಗೆ ಅನುಗುಣವಾಗಿ ಸಹಾಯಧನ ಪರಿಷ್ಕರಿಸಲಾಗುವುದೇ; | ರಾಜ್ಯ ಸರ್ಕಾರವು 2026-27ನೇ ಸಾಲಿನ ಆಯವ್ಯಯದಲ್ಲಿ ವಿವಿಧ ವಸತಿ ಯೋಜನೆಯಡಿ ಆಯ್ಕೆಯಾಗುವ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ನೀಡುವ ಸಹಾಯಧನವನ್ನು ರೂ.1.20 ಲಕ್ಷಗಳಿಂದ ರೂ. 2.00 ಲಕ್ಷಗಳಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳಿಗೆ ರೂ.2.00 ಲಕ್ಷಗಳಿಂದ ರೂ.3.00 ಲಕ್ಷಗಳಿಗೆ ಹೆಚ್ಚಿಸಲಾಗುವುದು ಎಂದು ಘೋಷಿಸಲಾಗಿದೆ. |
| ಇ) | ಹೆಚ್ಚುವರಿ ಹಣದ ಕೊರತೆಯಿಂದ ಅಪೂರ್ಣವಾಗಿರುವ ಮನೆಗಳಿಗೆ ವಿಶೇಷ ಅನುದಾನ ನೀಡಲಾಗುವುದೇ? | ಪ್ರಸ್ತುತ ಅಪೂರ್ಣವಾಗಿರುವ ಮನೆಗಳಿಗೆ ಆಯಾ ಶ್ರೇಣಿಗಳಡಿ ನಿಗದಿಪಡಿಸಲಾದ ಘಟಕ ವೆಚ್ಚವನ್ನು ಪ್ರಗತಿಗನುಗುಣವಾಗಿ ಬಿಡುಗಡೆ ಗೊಳಿಸಲಾಗುತ್ತಿದೆ. ಯಾವುದೇ ವಿಶೇಷ ಅನುದಾನ ನೀಡುವ ಬಗ್ಗೆ ಪ್ರಸ್ತಾಪವಿರುವುದಿಲ್ಲ. |

ಸಂಖ್ಯೆ:ವಇ 333 ಹೆಚ್ಎಎಂ 2026

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ ಸಚಿವರು